# ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ನಡವಳಿಗಳು

**ವಿಷಯ:** ರಾಜ್ಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಮಹಿಳೆಯರ ಮೇಲೆ ನಡೆಯಲಿರುವ ಲೈಂಗಿಕ ಕಿರುಕುಳ ತಡೆಯಲು ರಚಿಸಲಾಗಿರುವ ದೂರು ನಿವಾರಣಾ ಸಮಿತಿಗಳ ಕಾರ್ಯ ವೈಖರಿಯನ್ನು ಪರಿಶೀಲಿಸಲು ನೊಡಲ್ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ

**ಉಲ್ಲೇಖ:** 1) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ:ಡಿಟಿಇ/244/ಇಎಸ್‌ಟಿ(7)/2012 ದಿನಾಂಕ:25-04-2017.

2) ಕಾರ್ಯದರ್ಶಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ ರವರ ಪತ್ರ ಸಂಖ್ಯೆ:ಕರಾಮಾ/S.H.W./2018-19/1493 ದಿನಾಂಕ:31-07-2018.

**ಪ್ರಸ್ತಾವನೆ:**

ಓದಲಾದ ಉಲ್ಲೇಖ(1)ರ ಸುತ್ತೋಲೆಯನ್ವಯ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್, ಕಿರಿಯ ತಾಂತ್ರಿಕ ಶಾಲೆಗಳಲ್ಲಿ ರಚಿಸಲಾಗಿರುವ ಮಹಿಳಾ ಸಂರಕ್ಷಣೆ ಅಂತರಿಕ ದೂರು ನಿವಾರಣಾ ಸಮಿತಿಯ ಕಾರ್ಯವೈಖರಿಯನ್ನು ಪರಿಶೀಲಿಸಲು ಉಲ್ಲೇಖ(2)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಕ ಮಾಡುವಂತೆ ತಿಳಿಸಲಾಗಿರುವ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಲಾಗಿದೆ.

**ಆದೇಶ ಸಂಖ್ಯೆ: ಡಿಟಿಇ 86 ಇಎಸ್‌ಟಿ(7) 2017, ದಿನಾಂಕ: 14-09-2018** /1765

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಮಹಿಳೆಯರ ಮೇಲೆ ನಡೆಯಲಿರುವ ಲೈಂಗಿಕ ಕಿರುಕುಳ ತಡೆಯಲು ರಚಿಸಲಾಗಿರುವ ದೂರು ನಿವಾರಣಾ ಸಮಿತಿಗಳ ಕಾರ್ಯ ವೈಖರಿಯನ್ನು ಪರಿಶೀಲಿಸಲು ಶ್ರೀಮತಿ ಜಿ. ರಶ್ಮಿ, ಜಂಟಿ ನಿರ್ದೇಶಕರು (ಆಡಳಿತ) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಲಾಗಿದೆ.

ನಿರ್ದೇಶಕರು

ಇವರಿಗೆ,

ಶ್ರೀಮತಿ ಜಿ.ರಶ್ಮಿ, ಜಂಟಿ ನಿರ್ದೇಶಕರು (ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂ.
2. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ನಂ.107, ಕಾವೇರಿ ಭವನ, ಮೊದಲನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕೆ.ಜಿ ರಸ್ತೆ, ಬೆಂಗಳೂರು – 560 009.
3. ಸರ್ಕಾರದ ಅಧೀನ ಕಾರ್ಯದರ್ಶಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂ.
4. ಸರ್ಕಾರದ ಅಧೀನ ಕಾರ್ಯದರ್ಶಿ ಶಿಕ್ಷಣ ಇಲಾಖೆ(ಸಾಮಾನ್ಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ದೂರು ನಿವಾರಣಾ ಸಮಿತಿ ಬೆಂ.
6. ತಾಂತ್ರಿಕ ಶಿಕ್ಷಣ ಇಲಾಖೆಗೆ ಒಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್/ಸರ್ಕಾರಿ ಪಾಲಿಟೆಕ್ನಿಕ್/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ ಸಮಿತಿಯ ಎಲ್ಲಾ ಅಧ್ಯಕರುಗಳಿಗೆ ಹಾಗೂ ಸದಸ್ಯರುಗಳಿಗೆ (ಇಲಾಖಾ ವೆಬ್‌ಸೈಟ್ ಮೂಲಕ) ಸೂಚನಾ ಫಲಕದಲ್ಲಿ ಪ್ರಕಟಿಸುವುದು.
7. ನಿರ್ದೇಶಕರು ಆಪ್ತ ಶಾಖೆಗೆ
8. ಇ-ಆಡಳಿತ ಘಟಕಕ್ಕೆ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.